ನಿಯೋಜಿಸಿರುವುದರಿಂದ 394 ವೈದ್ಯರ ಹುದ್ದೆಗಳು ಖಾಲಿ ಇವೆ.

2) 90

3) ಸ್ನಾತಕೋತ್ತರ ವ್ಯಾಸಂಗಕ್ಕೆ ತೆರಳಿರುವ ವೈದ್ಯಾಧಿಕಾರಿಗಳಲ್ಲಿ 122 ವೈದ್ಯಾಧಿಕಾರಿಗಳು ತಮ್ಮ ವ್ಯಾಸಂಗವನ್ನು ಫೆಬ್ರುವರಿ: ಮಾರ್ಚ್: 93 ರಲ್ಲಿ ಮುಗಿಸಿ ವಾಪಸ್ ಬರುವವರಿದ್ದು ಇವರನ್ನು 122 ಖಾಲಿ ಇರುವ ಹುದ್ದೆಗಳಿಗೆ ನೇಮಿಸಲಾಗುವುದು. ಉಳಿದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಜರೂರಾಗಿ ಕ್ರಮವನ್ನು ಕೈಗೊಳ್ಳಲಾಗುವುದು.

ಅರಣ್ಯ ಇಲಾಖೆಗೆ ಸೇರಿದ ಜಮೀನನ್ನು ವಶಪಡಿಸಿಕೊಳ್ಳುವುದು.

108(585) ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸರ್ಕಾರದ "ಸಿ" ಮತ್ತು "ಡಿ" ಗುಂಪಿಗೆ ಸೇರಿದ ಭೂಮಿಯನ್ನು ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ತೆಗೆದುಕೊಂಡು ಆ ಬಗ್ಗೆ ಆದೇಶವನ್ನು ಹೊರಡಿಸಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಶಿರಾ ತಾಲ್ಲೂಕಿನಲ್ಲಿ ಒಣ ಬೇಸಾಯ ಅಭಿವೃದ್ಧಿ ಮಂಡಲಿಯವರು ಮತ್ತು ಸಾಮಾಜಿಕ ಅರಣ್ಯ ಇಲಾಖೆಯವರು ಸಸಿಗಳನ್ನು ನೆಡುವ ನೆಪವನ್ನೊಡ್ಡಿ ಸುಮಾರು 10–15 ವರ್ಷಗಳಿಂದ ಬಗರ್ ಹುಕುಂನಿಂದ ಸಾಗುವಳಿ ಮಾಡುತ್ತಿರುವ ರೈತರನ್ನು 'ಒಕ್ಕಲೆಬ್ಬಿಸುತ್ತಿರುವುದು ಮತ್ತು ರೈತರ ವಿರುದ್ಧ ಕಠಿಣ ಕ್ರಮಗಳನ್ನು ತೆಗೆದುಕೊಳ್ಳುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ;

ಇ) ಹಾಗಿದ್ದಲ್ಲಿ ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವ ರೈತರಿಗೆ ಇವರುಗಳಿಂದ ತೊಂದರೆಯಾಗದಂತೆ ರಕ್ಷಣೆ ನೀಡಲಾಗುವುದೇ ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಬಂದಿರುತ್ತದೆ.

ಆ) ಕಂದಾಯ ಇಲಾಖೆಗೆ ಸಂಬಂಧಿಸಿದೆ.

ಇ) ಕಂದಾಯ ಇಲಾಖೆಗೆ ಸಂಬಂಧಿಸಿದೆ.

ಕಳ್ಳಂಬೆಳ್ಳ ಹೋಬಳಿ ತರೂರು ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಘಟಕವನ್ನು ತೆರೆಯುವುದು.

109(593) ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಳ್ಳಂಬೆಳ್ಳ ಹೋಬಳಿ ತರೂರು ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಘಟಕವನ್ನು ಸ್ಥಾಪಿಸಲು ಈಗಾಗಲೇ 25,000 ರೂ.ಗಳನ್ನು ವಂತಿಕೆ ನೀಡಿದ್ದು ಬೇಕಾದ ಭೂಮಿಯನ್ನು ಆರೋಗ್ಯ ಘಟಕಕ್ಕೆ ನೀಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, 1992–93ನೇ ಸಾಲಿನಲ್ಲಿ ಆದ್ಯತೆ ಮೇಲೆ ಮಂಜೂರಾತಿಯನ್ನು ನೀಡಲಾಗುವುದೇ ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಬಂದಿದೆ

ಆ) ಇಲ್ಲ

ಶಿರಾ ತಾಲ್ಲೂಕು ಕಳ್ಳಂಬೆಳ್ಳದಲ್ಲಿ ಹೆರಿಗೆ ಆಸ್ಪತ್ರೆಯ ಮಂಜೂರಾತಿಗೆ ಒತ್ತಾಯ.

110 (594) ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಶಿರಾ ತಾಲ್ಲೂಕು ಕಳ್ಳಂಬೆಳ್ಳದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವು ಅತಿ ಹೆಚ್ಚಿನ ಪ್ರದೇಶವನ್ನೊಳಗೊಂಡಿದ್ದು ಹೆರಿಗೆ ಆಸ್ಪತ್ರೆಯು ಅತ್ಯವಶ್ಯಕವಾಗಿ ಬೇಕಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಹೆರಿಗೆ ಆಸ್ಪತ್ರೆಗೆ ಮೂಲತಃ ಬೇಕಾಗುವ ವಸತಿ ಸೌಕರ್ಯ ಮತ್ತು ವಾರ್ಡ್‌ಗಳ ಸೌಕರ್ಯ ಈಗಾಗಲೆ ಸಾಕಷ್ಟಿರುವುದು ಸರ್ಕಾರಕ್ಕೆ ತಿಳಿದಿದೆಯೆ;

ಇ) ಹಾಗಿದ್ದಲ್ಲಿ, ಸಾರ್ವಜನಿಕ ವಂತಿಗೆ ಇಲ್ಲದೇ ನೇರವಾಗಿ ಮಹಿಳಾ ವೈದ್ಯಾಧಿಕಾರಿಯ ಹುದ್ದೆಯನ್ನು ಅಲ್ಲಿಗೆ ಸರ್ಕಾರವು ಮಂಜೂರು ಮಾಡುವುದೆ ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಬಂದಿದೆ.

ಆ) ಇಲ್ಲ

ಇ) ಜಿಲ್ಲಾ ಪರಿಷತ್ತು ತನ್ನ ಆಯವ್ಯಯದಲ್ಲಿ ಸೂಕ್ತ ಅನುದಾನ ಒದಗಿಸಿಕೊಂಡು ಪ್ರಸ್ತಾವನೆ ಕಳುಹಿಸಿದ ಕೂಡಲೇ ಪರಿಶೀಲಿಸಲಾಗುವುದು.

ನೆಲಮಂಗಲದಲ್ಲಿ ಸಂಚಾರಿ ಪೊಲೀಸ್ ಸಿಬ್ಬಂದಿ ನೇಮಕ

111 (690) ಶ್ರೀ ಆಂಜನಮೂರ್ತಿ (ನೆಲಮಂಗಲ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ನೆಲಮಂಗಲ ಟೌನ್ ಮುಖಾಂತರ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿ 4ರಲ್ಲಿ ಹೆಚ್ಚು ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಅಪಘಾತಗಳನ್ನು ತಡೆಯಲು ಸರ್ಕಾರವು ಹೆಚ್ಚಿನ ಸಿಬ್ಬಂದಿ ಒದಗಿಸುವುದು ಹಾಗೂ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯುವ ಆಲೋಚನೆಯಿದೆಯೇ ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಹೌದು.